# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

| | |
|---|---|
| | ಸಹಾಯಕ ಅಭಿಯಂತರರ ಕಛೇರಿ,<br>16ನೇ ಅಡ್ಡರಸ್ತೆ ಲಕ್ಕಸಂದ್ರ,<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,<br>ಬೆಂಗಳೂರು-30, ದಿನಾಂಕ : |

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

ವಿಷಯ:- ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ.

ಉಲ್ಲೇಖ:1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲೂಪಿ 24739/2012, ದಿನಾಂಕ: 10.11.2017

2) ಕೇಂದ್ರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 02.11.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:146 ಲಕ್ಕಸಂದ್ರ 16ನೇ ಅಡ್ಡರಸ್ತೆ ಸಹಾಯಕ ಅಭಿಯಂತರರ ರವರ ಕಛೇರಿ ಬೆಂಗಳೂರು – 560030 ಇಲ್ಲಿ ಸಭೆಯನ್ನು ದಿನಾಂಕ: 29.04.2022 ರ ಬೆಳಿಗ್ಗೆ 11:00 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 146 ಲಕ್ಕಸಂದ್ರಕ್ಕೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

:ಸಭಾ ಅಜೆಂಡಾ:

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ವಾರ್ಡ್ ಸಮಿತಿಯನ್ನು ರಚಿಸುವ ಬಗ್ಗೆ |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳ ಬಗ್ಗೆ ಚರ್ಚೆ |

28/4/2022

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, ಲಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ರವರಿಗೆ :-

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-14 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-146 ಲಕ್ಕಸಂದ್ರ ಕಛೇರಿಯಲ್ಲಿ ದಿನಾಂಕ: 29.04.2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ವಿಷಯ: ವಾರ್ಡ್ ಸಮಿತಿ ಸಭೆಯ ಬಗ್ಗೆ.

ಉಲ್ಲೇಖ: ವಾರ್ಡ್ ಕಮಿಟಿ ನೋಡಲ್ ಅಧಿಕಾರಿಗಳುನ್ನು ನೇಮಿಸಿರುವ ಕಛೇರಿ ಆದೇಶ ಸಂಖ್ಯೆ ಬಿ12(5)ಪಿ.ಆರ್/35/20-21, ದಿನಾಂಕ: 16.04.2021

*****

ಉಲ್ಲೇಖ(1) ರ ಸಭಾ ಸುಚನಾ ಪತ್ರದ ಅನುಸಾರ ದಿನಾಂಕ: 29.04.2022 ರಂದು ಲಕ್ಕಸಂದ್ರ ವಾರ್ಡ್ ಸಂ 146ರ ಕಾರ್ಯಲಯದಲ್ಲಿ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಯ ನಡವಳಿಗಳು

ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಯೋಗೇಶ್.ಕೆ.ಪಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು | 9902083785 |
| 2 | ಶ್ರೀ.ನರೇಶ್‌ಕುಮಾರ್ ಕೆ ಸ.ಇಂ ವಾರ್ಡ್ 146 ಲಕ್ಕಸಂದ್ರ (ಪ್ರಭಾರ) | 9844407499 |
| 3 | ಶ್ರೀಮತಿ ರೂಪ ಹಿರಿಯ ಆರೋಗ್ಯಾಧಿಕಾರಿಗಳು | 9591399429 |
| 4 | ಶ್ರೀ ಸಂದೀಪ್ ವಿ ಕೆಲಸ ಪರಿವೀಕ್ಷಕರು | 9513342625 |
| 5 | ಶ್ರೀ.ವಿದ್ಯಾಧರ್ ಕಿರಿಯ ಆರೋಗ್ಯಾಧಿಕಾರಿಗಳು | 9480688446 |
| 6 | ಶ್ರೀ ಪರಶುರಾಮ ಕೆ ಕಂದಾಯ ಪರಿವೀಕ್ಷಕರು | 9916666134 |
| 7 | ಶ್ರೀ ಮುಹೀಬುಲ್ಲಾ ಹೆಚ್.ಎಮ್ ಮೌಲ್ಯಮಾಪಕರು | 9886306562 |
| 8 | ಶ್ರೀ. ಸಮೃದ್ಧ್.ಎ ಕಿರಿಯ ಅಭಿಯಂತರರು | 8050360498 |

* * * * * *

ದಿನಾಂಕ-29-04-2022 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1) ಘನತ್ಯಾಜ್ಯ ನಿರ್ವಹಣೆ ಬಗ್ಗೆ.

ಸಭೆಗೆ ಹಾಜರಿದ್ದ, ಶ್ರೀ ವಿದ್ಯಾಧರ್ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ ಸಮರ್ಪಕವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಮಾಡುತ್ತಿದ್ದು, ಅನೇಕ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಮುಂದುವರೆದು ಒಣತ್ಯಾಜ್ಯ ಸಂಗ್ರಹಣ ಘಟಕದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹವಾಗಿದ್ದು, ಕೂಡಲೇ ತೆರವುಗೊಳಿಸಲು ಕೋರಿದರು. ಈ ಸಂಬಂಧ, ಸಂಬಂಧಿಸಿದ ಮೇಲ್ವಿಚಾರಕರಿಗೆ ತಿಳಿಸಲು ಕ್ರಮವಹಿಸಲಾಗುವುದೆಂದು ತಿಳಿಸಿದರು.

ಕ್ರಮ:- ಈ ಬಗ್ಗೆ ಸಂಬಂಧ ಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾ.ನಿ ರವರು ಕ್ರಮವಹಿಸುವಂತೆ ಸೂಚಿಸಿದರು.



Scanned with CamScanner

ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 146 ರವರು ಮಾತನಾಡಿ ಸಮರ್ಪಕವಾಗಿ ಮುಖ್ಯರಸ್ತೆಗಳಲ್ಲಿ ಸರಿಯಾಗಿ ಕಸ ಗುಡುಸುತ್ತಿರುವುದಿಲ್ಲ ಹಾಗೂ ಕರ್ಬ್ ಪಕ್ಕದಲ್ಲಿ ಬಿದ್ದಿರುವ ಮಣ್ಣನ್ನು ಸಹ ತೆರವುಗೊಳಿಸುವುದಿಲ್ಲವೆಂದು ತಿಳಿಸಿದರು. ಈ ಬಗ್ಗೆ ಹಿಂದಿನ ಸಭೆಯಲ್ಲಿ ತಿಳಿಸಿರುವಂತೆ ಶ್ರೀ ವಿದ್ಯಾಧರ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಮುಖ್ಯರಸ್ತೆಗಳಲ್ಲಿ ಕರ್ಬ್ ಪಕ್ಕದ ಮಣ್ಣನ್ನು ಮತ್ತು ತೊಳು ಚರಂಡಿಗಳನ್ನು ಸ್ವಚ್ಛಗೊಳಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು

2) ಕೋವಿಡ್ ನಿರ್ವಹಣೆ ಮಾಡುವಬಗ್ಗೆ.

ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ಮೂರನೇ ಅಲೆಯ ಹೊಸ ರುಪಾಂತರಿ ತಳಿ ಓಮಿಕ್ರಾನ್ ರೋಗ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ದರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲು ಜಾಗೃತಿ ಮೂಡಿಸಬೇಕು ಹಾಗೂ ಮಾಸ್ಕ ದರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

ಸಭಾಧ್ಯಕ್ಷರು ಮಾತನಾಡಿ, ಕೋವಿಡ್-19 3ನೇ ಅಲೆಯ ವಿವರ ಹಾಗೂ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಲಾಗಿ, ಸಭೆಗೆ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹಾಲಿ ವಾಸ್ತುಸ್ಥಿತಿ ಕೋವಿಡ್-3ನೇ ಅಲೆ ಮತ್ತು ರೂಪಾಂತರಿ ತಳಿ ಓಮಿಕ್ರಾನ್ ರೋಗ ನಿಯಂತ್ರಣದಲ್ಲಿದ್ದು, ಪಾಸಿಟಿವ್ ಕೆಸ್‌ಗಳು ಇಳಿಕೆಯಾಗಿರುತ್ತದೆ. ಹೋಮ್ ಐಸೋಲೇಷನ್ ಕೂಡ ನಿಯಂತ್ರಣದಲ್ಲಿರುತ್ತದೆ. ಆದರೂ ರೋಗ ಹರಡದಂತೆ ಮುಂಜಾಗ್ರತೆ ಕ್ರಮಗಳು ಕೈಗೊಳ್ಳಲು ನಮ್ಮ ಜವಾಬ್ದಾರಿಯಾಗಿರುತ್ತದೆ. ಮುಂದೆ ಕೋರೊನಾ ರೂಪಾಂತರಿ ಬೆರೆ ಬೆರೆ ತಳಿಗಳು ಬರುವ ಸಂಭವವಿದ್ದು, ನಮ್ಮ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಮುಂಜಾಗ್ರತ ಕ್ರಮಕೈಗೊಳ್ಳಲು ಸಿದ್ದವಿರುವದಾಗಿ ಸಭೆಗೆ ತಿಳಿಸಿದರು ಮತ್ತು 16-18ನೆ ವಯಸ್ಸುಳ್ಳ ಯುವಜನರಿಗೆ ಶೇ 70% ಕೋರನಾ ಲಸೀಕೆಯನ್ನು ನೀಡಲಾಗಿರುತ್ತದೆ ಹಾಗೂ ಕೋರನಾ ವಾರಿಯರ್ಸ್ ಹಾಗೂ 60ವರ್ಷ ಮೇಲ್ಪಟ್ಟ ಹಿರಿಯರಿಗೆ ಬೂಸ್ಟರ್ ಡೋಸ್ ಲಸಿಕೆ ನೀಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಈ ಬಗ್ಗೆ ಸದುಪಯೋಗಪಡೆದುಕೊಳ್ಳಲು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರಿಗೆ ತಿಳಿಸಿದರು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು

29/4/2022

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, ಲಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ



Scanned with CamScanner